ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ತೋಟಗಾರಿಕೆ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆ ಬಗ್ಗೆ

ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

225 (290) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ತೋಟಗಾರಿಕೆ ಅಭಿವೃದ್ಧಿಗಾಗಿ ಅನುಷ್ಠಾನಗೊಳ್ಳುತ್ತಿರುವ ಕೇಂದ್ರ/ರಾಜ್ಯ ಸರ್ಕಾರದ ಯೋಜನೆಗಳು ಯಾವುವು ; ಸದರಿ ಯೋಜನೆಗಳಲ್ಲಿ ಎಸ್‌ಸಿಪಿ/ಟಿಎಸ್‌ಪಿ ಯಿಂದ ರೈತರಿಗೆ ನೀಡುವ ಸಹಾಯಧನ ಶೇಕಡ ಪ್ರಮಾಣ ಎಷ್ಟು ;

(ಆ) 2020-21ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಯೋಜನೆಗಳಿಗೆ ರಾಜ್ಯ ಸರ್ಕಾರದಿಂದ ಎಸ್‌ಸಿಪಿ/ಟಿಎಸ್‌ಪಿ ಯಡಿ ರೈತರಿಗೆ ಹೊಂದಾಣಿಕೆ ಮೊತ್ತವನ್ನು ನೀಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಎಷ್ಟು ಮೊತ್ತ ನೀಡಲಾಗಿದೆ ;

(ಇ) 2019-20ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯಲ್ಲಿ ಅನುಷ್ಠಾನಗೊಳಿಸಿರುವ ಎಲ್ಲಾ ಯೋಜನೆಗಳನ್ನು ಪ್ರಸಕ್ತ ಸಾಲಿನಲ್ಲಿಯೂ ಅನುಷ್ಠಾನಗೊಳಿಸಲಾಗುತ್ತಿದೆಯೇ ;

(ಈ) ಪ್ರಸಕ್ತ ಸಾಲಿನಲ್ಲಿ 30 ಹೆಚ್.ಪಿ. ಟ್ರ್ಯಾಕ್ಟರ್‌ಗಳಿಗೆ ಸಹಾಯಧನ ನೀಡಲಾಗುತ್ತಿದೆಯೇ ; ಹಾಗಿದ್ದರೆ, ಸಹಾಯಧನದ ಮೊತ್ತ ಎಷ್ಟು; ಇಲ್ಲವಾದಲ್ಲಿ, ಯಾವ ಕಾರಣಕ್ಕೆ ನೀಡಲಾಗುತ್ತಿಲ್ಲ ?